# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1990
ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್
ಉತ್ತರಿಸುವ ದಿನಾಂಕ : 24-03-2021
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ವಸತಿ ಶಾಲೆಗಳ ಸಂಖ್ಯೆ ಎಷ್ಟು;</td><td>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿಯ 02 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಹಾಗೂ ಪರಿಶಿಷ್ಟ ವರ್ಗದ ವಸತಿ ಶಾಲೆಗಳು ಇರುವುದಿಲ್ಲ.</td></tr>
<tr><td>ಆ)</td><td>ವಸತಿ ಶಾಲೆಗಳಲ್ಲಿ ಶಿಕ್ಷಣ ಪಡೆಯುತ್ತಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಶಾಲಾವಾರು ವಿವರ ನೀಡುವುದು)</td><td>ಈ ವಸತಿ ಶಾಲೆಗಳಲ್ಲಿ 6 ರಿಂದ 10ನೇ ತರಗತಿ ವರೆಗೆ ವ್ಯಾಸಂಗ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಕೋವಿಡ್-19ರ ಪರಿಣಾಮದಿಂದಾಗಿ 2020-21ನೇ ಸಾಲಿನಲ್ಲಿ 7 ರಿಂದ 10ನೇ ತರಗತಿ ವರೆಗೆ 329 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ಶಾಲಾವಾರು ದಾಖಲಾತಿ ವಿವರಗಳು ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವಸತಿ ಶಾಲೆ ಹೆಸರು</th><th>ದಾಖಲಾತಿ ಸಂಖ್ಯೆ</th></tr>
<tr><td>01</td><td>ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮುಂಡಾಜೆ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ</td><td>186</td></tr>
<tr><td>02</td><td>ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆ, ಹೊಸಂಗಡಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.</td><td>143</td></tr>
<tr><td colspan="2">ಒಟ್ಟು</td><td>329</td></tr>
</table>
6ನೇ ತರಗತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಪರೀಕ್ಷೆಯನ್ನು ನಡೆಸಲಾಗಿದ್ದು, ವಿದ್ಯಾರ್ಥಿಗಳ ದಾಖಲಾತಿಗೆ ಕ್ರಮವಹಿಸಲಾಗುತ್ತಿದೆ.</td></tr>
<tr><td>ಇ)</td><td>ವಸತಿ ಶಾಲೆಗಳಿಗೆ ಶಿಕ್ಷಕ/ ಶಿಕ್ಷಕೇತರರಿಗೆ ಮಂಜೂರಾದ ಹುದ್ದೆಗಳು ಎಷ್ಟು; ಹಾಲಿ ಇರುವ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು; (ಅಂಕಿ-ಅಂಶಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)</td><td>ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪರಿಶಿಷ್ಟ ಜಾತಿಯ ವಸತಿ ಶಾಲೆಗಳಿಗೆ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳ ವಿವರಗಳನ್ನು ಅನುಬಂಧದಲ್ಲಿ ಇರಿಸಿದೆ.</td></tr>
<tr><td>ಈ)</td><td>ಸ್ವಂತ ಕಟ್ಟಡ ಇರುವ ಶಾಲೆಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)</td><td>ಎರಡೂ ವಸತಿ ಶಾಲೆಗಳು ಸ್ವಂತ ಕಟ್ಟಡ ಹೊಂದಿವೆ.</td></tr>
</table>

ಸಂಖ್ಯೆ ಸಕಇ 131 ಮೊಡೀಶಾ 2021

(ಬಿ. ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು.